# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ತ ಸದಸ್ಯರ ಹೆಸರು: | ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 1996 (2365) |
| ಉತ್ತರಿಸಬೇಕಾದ ದಿನಾಂಕ: | 29-03-2021. |
| ಉತ್ತರಿಸುವ ಸಚಿವರು: | ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಶಿವಮೊಗ್ಗ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಸರ್ಕಾರಿ ಸ್ವಾಯತ್ತ ಸಂಸ್ಥೆಯಾಗಿದ್ದು, 2007ನೇ ಸಾಲಿನಿಂದ ಪ್ರಾರಂಭಿಸಲಾಗಿರುತ್ತದೆ. ಸದರಿ ಸಂಸ್ಥೆಯು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಹಾಗೂ ಭಾರತೀಯ ವೈದ್ಯಕೀಯ ಪರಿಷತ್ತು, ನವದೆಹಲಿ ಇವರ ಅನುಮತಿಯೊಂದಿಗೆ 2007-08ನೇ ಸಾಲಿನಿಂದ 100 ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ಪ್ರಾರಂಭಗೊಂಡಿರುತ್ತದೆ. 2017-18ನೇ ಶೈಕ್ಷಣಿಕ ವರ್ಷದಿಂದ 150 ವಿದ್ಯಾರ್ಥಿಗಳ ಪ್ರವೇಶಾತಿಗೆ ಅನುಮತಿಯನ್ನು ನೀಡಲಾಗಿರುತ್ತದೆ.<br>2011-12ನೇ ಸಾಲಿನಿಂದ ಪ್ರೀ ಹಾಗೂ ಪ್ಯಾರಾ ಕ್ಲಿನಿಕಲ್ ವಿಷಯಗಳಲ್ಲಿ ಸ್ನಾತಕೋತ್ತರ ಪದವಿ ಕೋರ್ಸುಗಳನ್ನು ಪ್ರಾರಂಭಿಸಲಾಗಿರುತ್ತದೆ. 2019-20ನೇ ಸಾಲಿನಲ್ಲಿ ಕ್ಲಿನಿಕಲ್ ವಿಭಾಗಗಳಿಗೂ ಕೂಡ ವಿದ್ಯಾರ್ಥಿಗಳ ಪ್ರವೇಶಾತಿಗೆ ಅನುಮತಿಯನ್ನು ನೀಡಲಾಗಿರುತ್ತದೆ. |
| ಆ) | ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ಒದಗಿಸುವುದು) | ಅನ್ವಯಿಸುವುದಿಲ್ಲ. |

ಸಂಖ್ಯೆ: ಎಂಇಡಿ 210 ಎಂಪಿಎಸ್ 2021

(ಡಾ.ಕೆ.ಸುಧಾಕರ್)
ವೈದ್ಯಕೀಯ ಶಿಕ್ಷಣ ಹಾಗೂ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಇಲಾಖಾ ಸಚಿವರು